ಕಲ್ಯಾಣ ನಗರದಲ್ಲಿ ನಿರ್ಮಿಸುತ್ತಿರುವ ಗ್ರಂಥಾಲಯ ಕಟ್ಟಡದ ಕಾಮಗಾರಿ

694 (177) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞ ನಗರ), : ಮಾನ್ಯ ಪಶುಸಂಗೋಪನೆ, ಗ್ರಂಥಾಲಯ ಮತ್ತು ಸಣ್ಣ ಉಳಿತಾಯ, ಲಾಟರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞ ನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ. 27ರ ಕಲ್ಯಾಣ ನಗರದಲ್ಲಿ ಗ್ರಂಥಾಲಯದ ಕಟ್ಟಡ ನಿಮಾಣದ ಕಾರ್ಯ ಹಣಕಾಸಿನ ಮುಗ್ಗಟ್ಟಿನಿಂದ ಪೂರ್ಣಗೊಳಿಸದೆ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸದರಿ ಗ್ರಂಥಾಲಯ ನಿರ್ಮಾಣದ ಬಗ್ಗೆ ಇಲಾಖೆ ತೆಗೆದುಕೊಂಡಿರುವ ಕ್ರಮವೇನು (ವಿವರ ನೀಡುವುದು)?

ಶ್ರೀ ರೇವೂ ನಾಯಕ ಬೆಳಮಗಿ (ಪಶುಸಂಗೋಪನೆ, ಗ್ರಂಥಾಲಯ ಮತ್ತು ಸಣ್ಣ ಉಳಿತಾಯ, ಲಾಟರಿ ಸಚಿವರು) :

ಅ) ಸರ್ವಜ್ಞ ನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ. 27 ಕಲ್ಯಾಣ ನಗರ ಹೆಚ್.ಆರ್.ಬಿ.ಆರ್. ಬಡಾವಣೆಯಲ್ಲಿ ಕಟ್ಟಲಾಗುತ್ತಿರುವ ಗ್ರಂಥಾಲಯ ಕಟ್ಟಡವು ಹಣಕಾಸಿನ ಕೊರತೆಯಿಂದ ಅಪೂರ್ಣಗೊಂಡಿರುತ್ತದೆ. ಕಟ್ಟಡವು ಶಿಥಿಲಗೊಂಡಿರುವುದಿಲ್ಲ.

ಆ) ಹಣಕಾಸಿನ ಕೊರತೆ ಇರುವುದರಿಂದ ಈ ಕಟ್ಟಡದ ನೆಲಮಹಡಿಯನ್ನು ಮಾತ್ರ ಯಥಾಸ್ಥಿತಿಯಲ್ಲಿ ಪೂರ್ಣಗೊಳಿಸಲು ರೂ.99.00 ಲಕ್ಷಗಳ ಅಂದಾಜು ವೆಚ್ಚಗಳಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮವಹಿಸಲಾಗುತ್ತಿದೆ.

ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರೌಢ ಶಾಲೆ ಪ್ರಾರಂಭ

695 (178) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;